## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2121 |
| 2 | ಸದಸ್ಯರ ಹೆಸರು | : | ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 25.03.2021 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2019-2020ನೇ ಸಾಲಿನಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಬೇಕಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಬಾಕಿ ಉಳಿದ ಅನುದಾನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು; (ಮಾಹಿತಿ ನೀಡುವುದು) | 2019-2020ನೇ ಸಾಲಿನಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಬೇಕಾದ ಹಾಗೂ ಬಿಡುಗಡೆಯಾಗಿರುವ ಅನುದಾನದ ವಿವರಗಳು ಕೆಳಕಂಡಂತಿದೆ:<br>**(ರೂ.ಲಕ್ಷಗಳಲ್ಲಿ)**<br>**ವರ್ಷ** / **ಬಿಡುಗಡೆಯಾದ ಅನುದಾನ** / **ಬಿಡುಗಡೆಯಾಗ ಬೇಕಾದ ಅನುದಾನ**<br>2019-20 / 1492.00 / 308.00<br><br>ಬಾಕಿ ಉಳಿದ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಸಂಬಂಧ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 29 ವೆಚ್ಚ 06/2021(ಇ), ದಿನಾಂಕ: 10.03.2021ರಲ್ಲಿ ಕಡಿತಗೊಳಿಸಲಾದ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಲು ಸಾಧ್ಯವಿಲ್ಲವೆಂದು ಹಿಂಬರಹ ನೀಡಿದೆ. |
| ಆ) | 2019-2020ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಬಿಡುಗಡೆ ಮಾಡಲು ವಿಳಂಬ ಮಾಡುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮ ಕೈಗೊಳ್ಳಲಾಗಿದೆಯೇ? (ಮಾಹಿತಿ ನೀಡುವುದು) | ಹೌದು<br><br>ಆರ್ಥಿಕ ಇಲಾಖೆಯ ನಿರ್ದೇಶನದಂತೆ ಬಿಡುಗಡೆಯಾದ ಅನುದಾನ ಮತ್ತು ಆರಂಭಿಕ ಶಿಲ್ಕು ಸೇರಿ ಒಟ್ಟು ಅನುದಾನದಲ್ಲಿ ಶೇ.75ರಷ್ಟು ವೆಚ್ಚವಾದಲ್ಲಿ ಮಾತ್ರ ಮುಂದಿನ ಕಂತಿನ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಶೇ. 75 ರಷ್ಟು ವೆಚ್ಚವಾಗದಿದ್ದಲ್ಲಿ ಮುಂದಿನ ಕಂತಿನ ಅನುದಾನ ಬಿಡುಗಡೆಗೆ ಅವಕಾಶವಿರುವುದಿಲ್ಲ.<br><br>ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ಬಗ್ಗೆ, ಶಾಸಕರ ಪ್ರದೇಶಾಭಿವೃದ್ಧಿ ಅನುದಾನವನ್ನು ನಿಗದಿತ ಕಾಲಾವಧಿಯಲ್ಲಿ ವೆಚ್ಚ ಮಾಡಲು ದಿನಾಂಕ:23.06.2020 ರಂದು ಮಾನ್ಯ ಮುಖ್ಯ ಕಾರ್ಯದರ್ಶಿಯವರಿಂದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಹಾಗೂ ದಿನಾಂಕ:23.02.2021 ರಂದು ಖುದ್ದು ವಿಡಿಯೋ ಸಂವಾದದ ಮೂಲಕ ಜಿಲ್ಲಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ ಕ್ರಮ ಕೈಗೊಳ್ಳಲಾಗಿದೆ. |

**ಸಂಖ್ಯೆ: ಪಿಡಿಎಸ್ 38 ಕೆಎಲ್ಎಸ್ 2021**

**(ಡಾ|| ನಾರಾಯಣಗೌಡ)**
ಸಚಿವರು,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.